ಓ.ಎಸ್. ನಂಃ **65/2015**
ಪಿ.ಡಬ್ಲೂ-**2**

ದಿನಾಂಕ **28-04-2025** ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ವಾದಿಯ ಪರ: ಶ್ರೀ ಜಿ ಬಿ ಎನ್ ವಕೀಲರಿಂದಃ

ನಾನು ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸುತ್ತಿದ್ದು ಅದನ್ನು ನನ್ನ ಮಾಹಿತಿ ಮೇರೆಗೆ ನನ್ನ ವಕೀಲರು ತಯಾರಿಸಿರುತ್ತಾರೆ. ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇರುತ್ತವೆ ಮತ್ತು ಅದರಲ್ಲಿರುವ ಸಹಿ ನನ್ನದಾಗಿರುತ್ತದೆ.

ಸಾಕ್ಷಿಯು ತನ್ನ ತಂದೆಯಾದ PW-1 ರವರ ಮೂಲಕ ಗುರುತಿಸಿಕೊಂಡಿರುವ ನಿಪಿ-1 ರಿಂದ 19 ರ ದಾಖಲೆಗಳನ್ನು ಅಳವಡಿಸಿಕೊಂಡು ಮುಂದುವರೆಸುವಂತೆ ಕೋರಿಕೊಂಡು ದಿನಾಂಕ 02.04.2025 ರ ಅಧಿಕಾರ ಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿ-20, ಸಾಕ್ಷಿಯ ಆಧಾರ ಕಾರ್ಡ್ ನಿಪಿ-21 ಹಾಗೂ 44 ಪಹಣಿ ಪತ್ರಿಕೆಗಳನ್ನು ನಿಪಿ-22 ರಿಂದ 65 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಕಾರಣ ಇಲ್ಲದಿದ್ದರಿಂದ ಸಮಯ ನಿರಾಕರಿಸಲಾಗಿದೆ.

ಪಾಟೀ ಸವಾಲಿಗೆ ಸಮಯ ಕೋರಿದ್ದರಿಂದ ಸಮಯ ನೀಡಿ ಮುಂದೂಡಲಾಯಿತು.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ